**All India Radio: Bangalore**
**National Bulletin In Kannada**
**29.05.2025  7.35p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**29.05.2025  7.35p.m.**

**<><><><>**

ಮುಖ್ಯಾಂಶಗಳು

೧. ಬಿಹಾರದ ಪಾಟ್ನಾ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ

೨. ಪಟ್ಟಿ ಮಾಡಿದ ಭಯೋತ್ಪಾದಕರನ್ನು ಪಾಕಿಸ್ತಾನ ಭಾರತಕ್ಕೆ ಹಸ್ತಾಂತರಿಸಬೇಕು- ವಿದೇಶಾಂಗ ಸಚಿವಾಲಯ ಆಗ್ರಹ

೩. ನವದೆಹಲಿಯ ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ಸಾಹಿತ್ಯ ಸಮ್ಮೇಳಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ

೪. ಐಪಿಎಲ್ ಟಿ-೨೦ ಕ್ರಿಕೆಟ್: ಪಂಜಾಬ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ

**<><><><>**

ಬಿಹಾರದ ಪಾಟ್ನಾದಲ್ಲಿಂದು ಜೈಪ್ರಕಾಶ್ ನಾರಾಯಣ್ ಅಂತಾರಾಷ್ಟ್ರೀಯ ಪಾಟ್ನಾ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಬಿಹಾರ ರಾಜ್ಯಪಾಲ ಅರೀಫ್ ಮೊಹಮದ್‌ಖಾನ್, ಮುಖ್ಯಮಂತ್ರಿ ನಿತಿಶ್ ಕುಮಾರ್, ನಾಗರಿಕ ವಿಮಾನಯಾನ ಸಚಿವ ಕೆ. ರಾಮ್‌ಮೋಹನ್ ನಾಯ್ಡು ಉಪಸ್ಥಿತರಿದ್ದರು.

ಸುಮಾರು ೧ ಸಾವಿರದ ೨೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಪಾಟ್ನಾ ವಿಮಾನ ನಿಲ್ದಾಣದ ನೂತನ ಟರ್ಮಿನಲ್ ಕಟ್ಟಡವು ವಿಮಾನ ನಿಲ್ದಾಣದ ವಾರ್ಷಿಕ ಪ್ರಯಾಣಿಕರ ನಿರ್ವಹಣಾ ಸಾಮರ್ಥ್ಯವನ್ನು ಒಂದು ಕೋಟಿಗೆ ಹೆಚ್ಚಿಸಲಿದೆ. ೬೫ ಸಾವಿರ ಚದರ ಮೀಟರ್ ವಿಸ್ತೀರಣದಲ್ಲಿ ಪುನರ್ ಅಭಿವೃದ್ಧಿಗೊಳಿಸಿರುವ ಈ ಕಟ್ಟಡವು ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸಲಿವೆ.

ಇದೇ ವೇಳೆ ಅವರು, ೧ ಸಾವಿರದ ೪೧೦ ಕೋಟಿ ರೂಪಾಯಿ ಮೌಲ್ಯದ ಯೋಜನೆಯಾದ ಬಿಹ್ತಾ ವಿಮಾನ ನಿಲ್ದಾಣದ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ ನೆರೆವೇರಿಸಿದರು. ಉದ್ಘಾಟನಾ ಸಮಾರಂಭದ ನಂತರ ಪ್ರಧಾನಿ ನರೇಂದ್ರ ಮೋದಿಯವರು, ಪಾಟ್ನಾ ವಿಮಾನ ನಿಲ್ದಾಣದಿಂದ ಬಿರ್ಚಂದ್ ಪಟೇಲ್ ಮಾರ್ಗದಲ್ಲಿರುವ ಬಿಜೆಪಿ ರಾಜ್ಯ ಪ್ರಧಾನ ಕಚೇರಿವರೆಗೆ ಸುಮಾರು ೬ ಕಿಲೋಮೀಟರ್ ರೋಡ್ ಶೋ ನಡೆಸಿದರು.

ನಾಳೆ ಪ್ರಧಾನಿ ನರೇಂದ್ರ ಮೋದಿ ಅವರು, ರೋಹ್ತಾಸ್ ಜಿಲ್ಲೆಯ ಬಿಕ್ರಮ್‌ಗಂಜ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ೪೮ ಸಾವಿರದ ೫೨೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ನಂತರ, ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಲಿದ್ದಾರೆ.

<><><><>

ಪಾಕಿಸ್ತಾನದೊಂದಿಗಿನ ಮಾತುಕತೆಯ ಬಗ್ಗೆ ಭಾರತದ ನಿಲುವು ಸ್ಪಷ್ಟವಾಗಿದೆ ಮತ್ತು ಯಾವುದೇ ಮಾತುಕತೆ ದ್ವಿಪಕ್ಷೀಯವಾಗಿರಬೇಕು ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಯೋತ್ಪಾದನೆ ಮತ್ತು ಮಾತುಕತೆ ಒಟ್ಟಿಗೆ ಸಾಗಲು ಸಾಧ್ಯವಿಲ್ಲ. ಪಟ್ಟಿ ಮಾಡಿದ  ಭಯೋತ್ಪಾದಕರನ್ನು ಪಾಕಿಸ್ತಾನ ಭಾರತಕ್ಕೆ ಹಸ್ತಾಂತರಿಸಬೇಕಾಗಿದೆ ಎಂದು ಆಗ್ರಹಿಸಿದರು.

ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಪಾಕಿಸ್ತಾನವು ಭಾರತಕ್ಕೆ ಹಸ್ತಾಂತರಿಸಿದ ನಂತರ ಮಾತ್ರ ಜಮ್ಮು-ಕಾಶ್ಮೀರದ ಕುರಿತಾದ ಮಾತುಕತೆಗಳು ನಡೆಯುತ್ತವೆ ಎಂದರು.

ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ತನ್ನ ಬೆಂಬಲ ನೀಡುವುದನ್ನು ನಿಲ್ಲಿಸುವವರೆಗೂ ಸಿಂಧೂ ಜಲ ಒಪ್ಪಂದ ಸ್ಥಗಿತಗೊಳ್ಳಲಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

ಇರಾನ್‌ನಲ್ಲಿ ಕಾಣೆಯಾದ ಮೂವರು ಭಾರತೀಯ ಪ್ರಜೆಗಳ ಕುರಿತಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕೆಲವು ದಿನಗಳ ಹಿಂದೆ ಟೆಹ್ರಾನ್‌ನಲ್ಲಿ ಬಂದಿಳಿದ ನಂತರ ಅವರು ಕಾಣೆಯಾಗಿದ್ದಾರೆ. ಅವರನ್ನು ಪತ್ತೆಹಚ್ಚಲು, ಅವರ ಸುರಕ್ಷತೆ ಮತ್ತು ಭದ್ರತೆ ಮತ್ತು ಅವರು ಅಂತಿಮವಾಗಿ ಮನೆಗೆ ಮರಳುವ ನಿಟ್ಟಿನಲ್ಲಿ ಇರಾನ್ ಅಧಿಕಾರಿಗಳೊಂದಿಗೆ ನಾವು ಸಂಪರ್ಕದಲ್ಲಿದ್ದೇವೆ ಎಂದು ಅವರು ತಿಳಿಸಿದರು.

ಬಾಂಗ್ಲಾದೇಶದಲ್ಲಿನ ಬೆಳವಣಿಗೆಗಳ ಕುರಿತು ಮಾತನಾಡಿದ ರಣಧೀರ್ ಜೈಸ್ವಾಲ್, ಭಾರತವು ಬಾಂಗ್ಲಾದೇಶದೊಂದಿಗೆ ಸಕಾರಾತ್ಮಕ ಮತ್ತು ರಚನಾತ್ಮಕ ಸಂಬಂಧವನ್ನು ಬಯಸುತ್ತದೆ.

ಬಾಂಗ್ಲಾದೇಶವು ಸಮಗ್ರ, ನ್ಯಾಯಯುತ ಮತ್ತು ಮುಕ್ತ ಚುನಾವಣೆಗಳನ್ನು ನಡೆಸುವ ಮೂಲಕ ತನ್ನ ಜನರ ಇಚ್ಛೆ ಮತ್ತು ಆದೇಶವನ್ನು ಖಚಿತಪಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

<><><>

೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಕೆಲವು ದಿನಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಸಿದ್ಧತೆಗಳ ಕುರಿತು ಚರ್ಚಿಸಲು ಹಾಗೂ ಕಾರ್ಯತಂತ್ರಗಳನ್ನು ರೂಪಿಸಲು ನವದೆಹಲಿಯಲ್ಲಿಂದು ಅಂತರ್ ಸಚಿವಾಲಯ ಸಭೆ ನಡೆಯಿತು.

ಸಭೆಯಲ್ಲಿ ಪ್ರಮುಖ ಸಚಿವಾಲಯಗಳು, ಆಯುಷ್ ಸಂಸ್ಥೆಗಳು ಮತ್ತು ಸಂಬಂಧಿಸಿದ ಇಲಾಖೆಗಳು ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

ಸಭೆ ಉದ್ದೇಶಿಸಿ ಮಾತನಾಡಿದ ಆಯುಷ್ ಸಚಿವ ಪ್ರತಾಪ್ ರಾವ್ ಜಾಧವ್, ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕೇವಲ ಒಂದು ಆಚರಣೆ ಅಲ್ಲ. ಬದಲಾಗಿ ಸಮಗ್ರ ಆರೋಗ್ಯ ಖಾತರಿಗಾಗಿ ಸಚಿವಾಲಯಗಳು, ಸಂಸ್ಥೆಗಳು ಮತ್ತು ನಾಗರಿಕರನ್ನು ಒಂದುಗೂಡಿಸುವ ಚಳವಳಿಯಾಗಿದೆ ಎಂದು ಹೇಳಿದರು.

ಆಯುಷ್ ಸಚಿವಾಲಯದ ಕಾರ್ಯದರ್ಶಿ ವೈದ್ಯ ರಾಜೇಶ್ ಕೋಟೆಚಾ ಮಾತನಾಡಿ, ಜಾಗತಿಕ ಮಟ್ಟದಲ್ಲಿ ಅಂತಾರಾಷ್ಟ್ರೀಯ ಯೋಗ ದಿನವೂ ಅತೀ ದೊಡ್ಡ ಚಳವಳಿಗಳಲ್ಲಿ ಒಂದಾಗಿದೆ. ಜೂನ್ ೨೧ ರಂದು ಏಕಕಾಲದಲ್ಲಿ ೧ ಲಕ್ಷಕ್ಕೂ ಹೆಚ್ಚು ಯೋಗ ಕಾರ್ಯಕ್ರಮಗಳು ನಡೆಯಲಿವೆ. ಅಂಧ್ರ ಪ್ರದೇಶದ ವಿಶಾಖಪಟ್ಟಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

<><><><>

ನವದೆಹಲಿಯ ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ಇಂದು ಸಾಹಿತ್ಯ ಸಮ್ಮೇಳವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು.

ಎರಡು ದಿನಗಳ ಸಮ್ಮೇಳನವು ಕವಿಗಳ ಸಭೆ, ಭಾರತದ ಸ್ತ್ರೀವಾದಿ ಸಾಹಿತ್ಯ, ಜಾಗತಿಕ ದೃಷ್ಟಿಕೋನದಲ್ಲಿ ಭಾರತೀಯ ಸಾಹಿತ್ಯದ ಹೊಸ ನಿರ್ದೇಶನ ಸೇರಿದಂತೆ ಅನೇಕ ಗೋಷ್ಠಿಗಳು ನಡೆಯಲಿವೆ.

ಸಾಹಿತ್ಯ ಅಕಾಡೆಮಿ ಸಹಯೋಗದೊಂದಿಗೆ ರಾಷ್ಟ್ರಪತಿ ಭವನವು ಈ ಎರಡು ದಿನಗಳ ಸಾಹಿತ್ಯ ಸಮ್ಮೇಳವನ್ನು ಆಯೋಜಿಸಿದೆ. ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಉಪಸ್ಥಿತರಿದ್ದರು.

<><><><>

ಭಾಷೆಗಳ ವಿಷಯದಲ್ಲಿ ಭಾರತವು ವಿಶ್ವದಲ್ಲೇ ವಿಶಿಷ್ಟ ಸ್ಥಾನ ಹೊಂದಿದೆ. ದೇಶೀಯ ಭಾಷೆಗಳ ಸಾಹಿತ್ಯವು ಜ್ಞಾನದ ಚಿನ್ನದ ಗಣಿಯಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅಭಿಪ್ರಾಯಪಟ್ಟಿದ್ದಾರೆ.

ನವದೆಹಲಿಯಲ್ಲಿಂದು ಭಾರತೀಯ ಸಾಂಖಿಕ ಸೇವೆ -ಐಎಸ್‌ಎಸ್ ಪ್ರೊಬೇಷನರಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದ ಅವರು, ಭಾರತದ ಒಳಗೊಳ್ಳುವಿಕೆ ಅದರ ಭಾಷೆಗಳಲ್ಲಿ ಪ್ರತಿಫಲಿಸುತ್ತದೆ. ಅವು ದೇಶದ ಬೆನ್ನೆಯಲುಬಾಗಿದೆ ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿಯು ಮಾತೃಭಾಷೆಗೆ ಪ್ರಾಮುಖ್ಯತೆ ನೀಡಿದೆ. ವೈದ್ಯಕೀಯ ಮತ್ತು ಎಂಜಿನಿಯರಿಂಗ್‌ನಂತಹ ತಾಂತ್ರಿಕ ವಿಷಯಗಳಲ್ಲಿ ಸಹ ಸ್ಥಳೀಯ ಭಾಷೆಗಳಲ್ಲಿ ಶಿಕ್ಷಣ ನೀಡಲಾಗುತ್ತಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದರು.

<><><><>

'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಅಂದರೆ ವಿಜ್ಞಾನಿಗಳು ಪ್ರಯೋಗಾಲಯ ಬಿಟ್ಟು ರೈತರ ನಡುವೆ ಹೊಲಗಳಿಗೆ ತೆರಳಬೇಕು. ಹಳ್ಳಿಯಲ್ಲಿ ರೈತರೊಂದಿಗೆ ಕುಳಿತು ಚರ್ಚಿಸಬೇಕು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ಒಡಿಶಾದ ಪುರಿಯಲ್ಲಿ ಇಂದು 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಚಾಲನೆ ನೀಡಿ ಮಾತನಾಡಿದ ಅವರು, ಇಂದಿನಿಂದ ಎಲ್ಲಾ ವಿಜ್ಞಾನಿಗಳು ಪ್ರಯೋಗಾಲಯ  ಬಿಟ್ಟು ಗ್ರಾಮಕ್ಕೆ ಬರುತ್ತಿದ್ದಾರೆ. ಅವರೊಂದಿಗೆ ಕೃಷಿಯಲ್ಲಿ ಹೊಸ ಪ್ರಯೋಗಗಳನ್ನು ಕಲಿಯುವ ಮೂಲಕ ಉತ್ಪಾದನೆಯನ್ನು ಹೆಚ್ಚಿಸುವಂತೆ ರೈತರಿಗೆ ಕರೆ ನೀಡಿದ್ದಾರೆ.

ದೇಶದ ೭೦೦ ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಈ ಅಭಿಯಾನ ನಡೆಯಲಿದ್ದು, ಜೂನ್ ೧೨ ರವರೆಗೆ ಮುಂದುವರಿಯಲಿದೆ.

ಅಭಿಯಾನದಲ್ಲಿ ಕರ್ನಾಟಕ ಸೇರಿದಂತೆ ತಮಿಳುನಾಡು, ತೆಲಂಗಾಣ, ಮೇಘಾಲಯ, ಮಧ್ಯಪ್ರದೇಶ, ದೆಹಲಿ ಮತ್ತು ಛತ್ತೀಸ್‌ಗಢ ರಾಜ್ಯಗಳಲ್ಲಿ ಸಚಿವರು ಪ್ರವಾಸ ಕೈಗೊಳ್ಳಲಿದ್ದಾರೆ.

<><><><>

ಜುಲೈ ೩ ರಂದು ವಾರ್ಷಿಕ ಅಮರ್‌ನಾಥ್ ಯಾತ್ರೆ ಆರಂಭವಾಗಲಿದೆ. ಯಾತ್ರಾ ಮಾರ್ಗಗಳು ಒಟ್ಟು ಸುತ್ತ ಮುತ್ತಲಿನ ಪ್ರದೇಶಗಳನ್ನು ಸುರಕ್ಷಿತವಾಗಿರುವ ದೃಷ್ಟಿಯಿಂದ ಕೇಂದ್ರ ಸರ್ಕಾರವು ಅರೆಸೇನಾ ಪಡೆಗಳನ್ನು ನಿಯೋಜಿಸಲು ಸಜ್ಜಾಗಿದೆ.

ಸುಗಮ ಮತ್ತು ಸುರಕ್ಷಿತ ಯಾತ್ರೆಯನ್ನು ಖಚಿತಪಡಿಸಿಕೊಳ್ಳಲು ಜಮ್ಮು ಮತ್ತು ಕಾಶ್ಮೀರದಾದ್ಯಂತ ಒಟ್ಟು ೫೮೧ ಅರೆಸೇನಾ ಪಡೆಗಳ ತುಕಡಿಗಳನ್ನು ನಿಯೋಜಿಸಲಾಗುವುದು. ಅಲ್ಲದೆ, ಈ ಪ್ರದೇಶದಲ್ಲಿ ಈಗಾಗಲೇ ನಿಯೋಜನೆಗೊಂಡಿರುವ ೧೫೬ ತುಕಡಿಗಳನ್ನು ಬಳಸಿಕೊಳ್ಳಲು ಕೇಂದ್ರ ಗೃಹ ಸಚಿವಾಲಯವು ಜಮ್ಮು ಮತ್ತು ಕಾಶ್ಮೀರ ಆಡಳಿತ ಮತ್ತು ಪೊಲೀಸರಿಗೆ ಅಧಿಕಾರ ನೀಡಿದೆ.

ನಿಯೋಜಿತ ಪಡೆಗಳು ಅಮರನಾಥ್ ದೇವಾಲಯವನ್ನು ಸುರಕ್ಷಿತವಾಗಿ ಇಡುವುದು, ಯಾತ್ರಿಕರಿಗೆ ಭದ್ರತೆ ಕಲ್ಪಿಸುವುದು, ಸೂಕ್ಷ್ಮ ಪ್ರದೇಶಗಳಲ್ಲಿ ಪ್ರಾಬಲ್ಯ ಸಾಧಿಸುವುದು ಹಾಗೂ ಬಾಲ್ಟಾಲ್ ಮತ್ತು ಪಹಲ್ಗಾಮ್ ಮಾರ್ಗಗಳಲ್ಲಿ ನಿರಂತರವಾಗಿ ಗಸ್ತು ತಿರುಗುವ ಕಾರ್ಯವನ್ನು ನಿರ್ವಹಿಸಲಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಯುದ್ಧದ ಸ್ವರೂಪ ಬದಲಾಗುತ್ತಿರುವುದರಿಂದ ಭಾರತದ ರಕ್ಷಣಾ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನವನ್ನು ದೊಡ್ಡ ಪ್ರಮಾಣದಲ್ಲಿ ಪರಿಚಯಿಸಲಾಗುತ್ತಿದೆ ಎಂದು ಭಾರತೀಯ ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್‌ಪ್ರೀತ್ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಸಿಐಐ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಅಪರೇಷನ್ ಸಿಂದೂರ-ಭಾರತದ ರಕ್ಷಣಾ ಕ್ಷೇತ್ರದ ಬಗ್ಗೆ ಸ್ಪಷ್ಟ ಕಲ್ಪನೆ ನೀಡಿದೆ. ಅಡ್ವಾನ್ಸ್ ಮೀಡಿಯಂ

ಕಾಂಬ್ಯಾಟ್ ಏರ್‌ಕ್ರಾಫ್ಟ್ - ಎಎಂಸಿಎ ಬಹಳ ದೊಡ್ಡ ಹೆಜ್ಜೆಯಾಗಿದೆ. ಭವಿಷ್ಯದಲ್ಲಿ ಇದರಿಂದ ಭಾರತಕ್ಕೆ ದೊಡ್ಡ ಪ್ರಮಾಣದ ಲಾಭವಾಗಲಿದೆ ಎಂದು ಅಭಿಪ್ರಾಯಪಟ್ಟರು.

<><><><>

ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ ಇಂದು ಪ್ಲೇ-ಆಫ್ ಪಂದ್ಯಗಳು ಆರಂಭವಾಗಿವೆ.

ಅಂಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಪಂಜಾಬ್ ಕಿಂಗ್ಸ್ ತಂಡವು ಚಂಡೀಗಢದ ಮುಲ್ಲನ್‌ಪುರದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಎರಡನೇ ಸ್ಥಾನದಲ್ಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದೊಂದಿಗೆ ಮುಖಾಮುಖಿಯಾಗಿದೆ.

ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><><><>